ಕರ್ನಾಟಕ ವಿಧಾನಸಭೆ

ಹದಿನಾಲ್ಕನೇ ವಿಧಾನಸಭೆ
(ಎಂಟನೇ ಅಧಿವೇಶನ)

ಕಾರ್ಯಕಲಾಪಗಳ ಪಟ್ಟಿ

ಗುರುವಾರ, ದಿನಾಂಕ 23ನೇ ಜುಲೈ, 2015
(ಸಮಯ: ಬೆಳಗ್ಗೆ 10.00 ಗಂಟೆಗೆ)

-----

1. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು	:	ಹತ್ತೊಂಬತ್ತನೇ ಪಟ್ಟಿ
ಆ) ದಿನಾಂಕ 02.07.2015ರ ನಾಲ್ಕನೇ ಪಟ್ಟಿಯಿಂದ ತಡೆಹಿಡಿಯಲಾದ ಶ್ರೀ ಹೆಚ್.ಡಿ ರೇವಣ್ಣ ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 46(1104)	:	ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು
ಇ) ದಿನಾಂಕ 09.07.2015ರ ಒಂಭತ್ತನೇ ಪಟ್ಟಿಯಿಂದ ತಡೆಹಿಡಿಯಲಾದ ಡಾ|| ಉಮೇಶ್ ಜಿ.ಜಾಧವ್ ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 134(1782)	:	ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು
ಈ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು	:	ಹತ್ತೊಂಬತ್ತನೇ ಪಟ್ಟಿ

2. ಶಾಸನ ರಚನೆ

I. ವಿಧೇಯಕವನ್ನು ಹಿಂದಕ್ಕೆ ಪಡೆಯುವುದು.

ಕರ್ನಾಟಕ ಲೋಕಾಯುಕ್ತ (ತಿದ್ದುಪಡಿ) ವಿಧೇಯಕ, 2015
ಶ್ರೀ ಸಿದ್ಧರಾಮಯ್ಯ (ಮುಖ್ಯಮಂತ್ರಿ) ಅವರು:

2015ನೇ ಸಾಲಿನ ಕರ್ನಾಟಕ ಲೋಕಾಯುಕ್ತ(ತಿದ್ದುಪಡಿ) ವಿಧೇಯಕವನ್ನು ಹಿಂಪಡೆಯಲು ಅನುಮತಿ ಕೋರುವುದು:

ಮು.ತಿ.ನೋ.,.

II. ವಿಧೇಯಕಗಳನ್ನು ಮಂಡಿಸುವುದು.

(i) ಕರ್ನಾಟಕ ಲೋಕಾಯುಕ್ತ (ತಿದ್ದುಪಡಿ) ವಿಧೇಯಕ, 2015
ಶ್ರೀ ಸಿದ್ದರಾಮಯ್ಯ (ಮುಖ್ಯಮಂತ್ರಿ) ಅವರು:

ಅ) 2015ನೇ ಸಾಲಿನ ಕರ್ನಾಟಕ ಲೋಕಾಯುಕ್ತ(ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;
ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

(ii) ಕರ್ನಾಟಕ ಪಟ್ಟಣ ಮತ್ತು ಗ್ರಾಮಾಂತರ ಯೋಜನೆ (ತಿದ್ದುಪಡಿ) ವಿಧೇಯಕ, 2015
ಶ್ರೀ ವಿನಯ ಕುಮಾರ್ ಸೊರಕೆ (ನಗರಾಭಿವೃದ್ಧಿ ಸಚಿವರು) ಅವರು:

ಅ) 2015ನೇ ಸಾಲಿನ ಕರ್ನಾಟಕ ಪಟ್ಟಣ ಮತ್ತು ಗ್ರಾಮಾಂತರ ಯೋಜನೆ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;
ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

(iii) ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ (ತಿದ್ದುಪಡಿ) ವಿಧೇಯಕ, 2015
ಶ್ರೀ ಆರ್.ವಿ. ದೇಶಪಾಂಡೆ (ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು) ಅವರು:

ಅ) 2015ನೇ ಸಾಲಿನ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು:
ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

3. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

ಸದಸ್ಯರಿಗೆ ಈಗಾಗಲೇ ಪ್ರತ್ಯೇಕವಾಗಿ ಕಳುಹಿಸಲಾಗಿರುವ ಮೂರನೇ ಹಾಗೂ ನಾಲ್ಕನೇ ಪಟ್ಟಿಯ ರೀತ್ಯಾ

4. ವರದಿಗಳನ್ನೊಪ್ಪಿಸುವುದು

1. ಶ್ರೀ ಎನ್.ಹೆಚ್. ಶಿವಶಂಕರ ರೆಡ್ಡಿ (ಉಪ ಸಭಾಧ್ಯಕ್ಷರು ಹಾಗೂ ಅಧ್ಯಕ್ಷರು, ಖಾಸಗಿ ಸದಸ್ಯರುಗಳ ವಿಧೇಯಕ ಹಾಗೂ ನಿರ್ಣಯಗಳ ಸಮಿತಿ) ಅವರು 2015ನೇ ಸಾಲಿನ ಖಾಸಗಿ ಸದಸ್ಯರುಗಳ ವಿಧೇಯಕ ಹಾಗೂ ನಿರ್ಣಯಗಳ ಸಮಿತಿಯ ಮೂರನೇ ಮತ್ತು ನಾಲ್ಕನೇ ವರದಿಗಳನ್ನೊಪ್ಪಿಸುವುದು.

2. ಶ್ರೀ ಕೆ. ಗೋಪಾಲ ಪೂಜಾರಿ (ಅಧ್ಯಕ್ಷರು, ಸ್ಥಳೀಯ ಸಂಸ್ಥೆಗಳ ಮತ್ತು ಪಂಚಾಯತ್ ರಾಜ್ ಸಂಸ್ಥೆಗಳ ಸಮಿತಿ) ಅವರು 2014-15ನೇ ಸಾಲಿನ ಸ್ಥಳೀಯ ಸಂಸ್ಥೆಗಳ ಮತ್ತು ಪಂಚಾಯತ್ ರಾಜ್ ಸಂಸ್ಥೆಗಳ ಸಮಿತಿಯ ಹನ್ನೊಂದನೇ ವರದಿಯನ್ನೊಪ್ಪಿಸುವುದು.

5. ಅರ್ಜಿಗಳನ್ನೊಪ್ಪಿಸುವುದು

1. **ಶ್ರೀ ಯು.ಬಿ.ಬಣಕಾರ್ (ಸದಸ್ಯರು) ಅವರು:-**

ಹಾವೇರಿ ಜಿಲ್ಲೆ, ಹಿರೇಕೆರೂರು ತಾಲ್ಲೂಕು, ಚಿಕ್ಕೇರೂರು ಗ್ರಾಮದಲ್ಲಿರುವ ಮೊರಾರ್ಜಿ ದೇಸಾಯಿ ಮಾದರಿ ವಸತಿ ಶಾಲೆಗೆ ಮೂಲಭೂತ ಸೌಕರ್ಯಗಳನ್ನು ಒದಗಿಸುವ ಬಗ್ಗೆ ಅರ್ಜಿಯನ್ನು ಒಪ್ಪಿಸುವುದು.

2. **ಶ್ರೀ ನಾರಾಯಣಗೌಡ (ಸದಸ್ಯರು) ಅವರು:-**

ಬಿ.ಡಿ.ಎ ಎಂಪ್ಲಾಯೀಸ್ ವೆಲ್‌ಫೇರ್ ಅಸೋಷಿಯೇಷನ್‌ನವರು ನಿವೃತ್ತ ನೌಕರರಿಗೆ ನಿವೇಶನ ನೀಡದೆ ವಂಚಿಸಿರುವ ಬಗ್ಗೆ ಅರ್ಜಿಯನ್ನು ಒಪ್ಪಿಸುವುದು.

6. ವಿತ್ತೀಯ ಕಾರ್ಯಕಲಾಪಗಳು

ಅ) 2015-16ನೇ ಸಾಲಿನ ಕೆಳಕಂಡ ಅನುದಾನ ಬೇಡಿಕೆಗಳ ಮೇಲೆ ಮುಂದುವರೆದ ಚರ್ಚೆ, ಸರ್ಕಾರದ ಉತ್ತರ ಹಾಗೂ ಮತಕ್ಕೆ ಹಾಕುವುದು.

ಬೇಡಿಕೆ ಸಂಖ್ಯೆ	ಬೇಡಿಕೆಗಳ ಹೆಸರು
03	ಆರ್ಥಿಕ
04	ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ
18	ವಾಣಿಜ್ಯ ಮತ್ತು ಕೈಗಾರಿಕೆ
24	ಇಂಧನ
12	ವಾರ್ತಾ, ಪ್ರವಾಸೋದ್ಯಮ ಮತ್ತು ಯುವಜನಸೇವೆಗಳು
17	ಶಿಕ್ಷಣ
02	ಪಶುಸಂಗೋಪನೆ ಮತ್ತು ಮೀನುಗಾರಿಕೆ
27	ಕಾನೂನು
28	ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ
08	ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ
14	ಕಂದಾಯ
05	ಒಳಾಡಳಿತ ಮತ್ತು ಸಾರಿಗೆ
16	ವಸತಿ
19	ನಗರಾಭಿವೃದ್ಧಿ
22	ಆರೋಗ್ಯ ಮತ್ತು ಕುಟುಂಬ ಕಲ್ಯಾಣ

10	ಸಮಾಜ ಕಲ್ಯಾಣ
15	ಮಾಹಿತಿ ತಂತ್ರಜ್ಞಾನ
26	ಯೋಜನೆ, ಸಾಂಖ್ಯಿಕ, ವಿಜ್ಞಾನ ಮತ್ತು ತಂತ್ರಜ್ಞಾನ
13	ಆಹಾರ ಮತ್ತು ನಾಗರೀಕ ಸರಬರಾಜು
06	ಮೂಲಭೂತ ಸೌಕರ್ಯ ಅಭಿವೃದ್ಧಿ
11	ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ
25	ಕನ್ನಡ ಮತ್ತು ಸಂಸ್ಕೃತಿ
23	ಕಾರ್ಮಿಕ

ಆ) 2015-16ನೇ ಸಾಲಿನ ಪೂರಕ ಅಂದಾಜುಗಳ (ಮೊದಲನೆ ಕಂತು) ಮೇಲೆ ಚರ್ಚೆ, ಸರ್ಕಾರದ ಉತ್ತರ ಹಾಗೂ ಮತಕ್ಕೆ ಹಾಕುವುದು.

7. ಶಾಸನ ರಚನೆ

I. ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

(i) ಕರ್ನಾಟಕ ಲೋಕಾಯುಕ್ತ (ತಿದ್ದುಪಡಿ) ವಿಧೇಯಕ, 2015
ಶ್ರೀ ಸಿದ್ಧರಾಮಯ್ಯ (ಮುಖ್ಯಮಂತ್ರಿ) ಅವರು:

ಅ) 2015ನೇ ಸಾಲಿನ ಕರ್ನಾಟಕ ಲೋಕಾಯುಕ್ತ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು.
ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

(ii) ಕರ್ನಾಟಕ ಪಟ್ಟಣ ಮತ್ತು ಗ್ರಾಮಾಂತರ ಯೋಜನೆ (ತಿದ್ದುಪಡಿ) ವಿಧೇಯಕ, 2015
ಶ್ರೀ ವಿನಯ ಕುಮಾರ್ ಸೊರಕೆ (ನಗರಾಭಿವೃದ್ಧಿ ಸಚಿವರು) ಅವರು:

ಅ) 2015ನೇ ಸಾಲಿನ ಕರ್ನಾಟಕ ಪಟ್ಟಣ ಮತ್ತು ಗ್ರಾಮಾಂತರ ಯೋಜನೆ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು.
ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

(iii) ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ (ತಿದ್ದುಪಡಿ) ವಿಧೇಯಕ, 2015
ಶ್ರೀ ಆರ್.ವಿ. ದೇಶಪಾಂಡೆ (ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು) ಅವರು:

ಅ) 2015ನೇ ಸಾಲಿನ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ(ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು.
ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

ಮು.ತಿ.ನೋ.,.

೮. ನಿಯಮ ೬೯ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯಗಳ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

1. ಶ್ರೀಯುತರುಗಳಾದ ಜಗದೀಶ್ ಶೆಟ್ಟರ್, ಬಸವರಾಜ್ ಬೊಮ್ಮಾಯಿ, ವಿಶ್ವೇಶ್ವರ ಹೆಗಡೆ ಕಾಗೇರಿ, ಎಸ್.ಸುರೇಶ್‌ಕುಮಾರ್, ಸಿ.ಟಿ.ರವಿ, ಬಿ.ಎನ್.ವಿಜಯಕುಮಾರ್ ಹಾಗೂ ಇತರರು ಬಿ.ಬಿ.ಎಂ.ಪಿ. ವ್ಯಾಪ್ತಿಯಲ್ಲಿ ಘನತ್ಯಾಜ್ಯ ನಿರ್ವಹಣೆಗೆ ತಯಾರಿಸಲಾಗಿರುವ ನೂತನ ಟೆಂಡರ್ ಅಂದಾಜು ಪಟ್ಟಿಯಲ್ಲಿನ ಅಕ್ರಮದ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ.

2. ಶ್ರೀಯುತರುಗಳಾದ ಕೆ.ಎಸ್.ಪುಟ್ಟಣ್ಣಯ್ಯ, ಅಶೋಕ ಖೇಣಿ ಮತ್ತು ಡಾ॥ ಉಮೇಶ್ ಜಿ. ಜಾಧವ್ ಅವರುಗಳು ಮಂಡ್ಯ ಜಿಲ್ಲೆಯಲ್ಲಿ ಅಕ್ರಮವಾಗಿ ನಡೆಯುತ್ತಿರುವ ಗಣಿಗಾರಿಕೆಯ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ.

3. ಶ್ರೀಯುತರುಗಳಾದ ಜಗದೀಶ್ ಶೆಟ್ಟರ್, ಗೋವಿಂದ ಎಂ.ಕಾರಜೋಳ, ಬಸವರಾಜ್ ಬೊಮ್ಮಾಯಿ, ಎಸ್. ಸುರೇಶ್‌ಕುಮಾರ್, ಲಕ್ಷ್ಮಣ ಸಂಗಪ್ಪ ಸವದಿ ಹಾಗೂ ಇತರರು ರಾಜ್ಯಾದ್ಯಂತ ಕ್ರಿಕೆಟ್ ಬೆಟ್ಟಿಂಗ್ ದಂಧೆ ಅವ್ಯಾಹತವಾಗಿ ನಡೆಯುತ್ತಿರುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ.

೯. ಗಮನ ಸೆಳೆಯುವ ಸೂಚನೆಗಳು

1. ಡಾ॥ ಕೆ.ಸುಧಾಕರ್ ಅವರು ಚಿಕ್ಕಬಳ್ಳಾಪುರ ತಾಲ್ಲೂಕಿನ ಕಸಬಾ ಹೋಬಳಿ ಅಥವಾ ನಂದಿ ಹೋಬಳಿಯಲ್ಲಿ ಕೈಗಾರಿಕಾ ವಲಯ ಸ್ಥಾಪನೆ ಮಾಡುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

2. ಶ್ರೀ ವಿಶ್ವನಾಥ (ಆನಂದ) ಚಂದ್ರಶೇಖರ ಮಾಮನಿ ಅವರು ಸವದತ್ತಿ ಎಲ್ಲಮ್ಮ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿನ ಅಂಗನವಾಡಿ ಕೇಂದ್ರಗಳಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸುವ ಹಾಗೂ ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಸಹಾಯಕಿಯರ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರ ಗಮನ ಸೆಳೆಯುವುದು.

3. ಶ್ರೀ ನಾರಾಯಣಗೌಡ ಅವರು ಕೆ.ಆರ್.ಪೇಟೆ ಪಟ್ಟಣದಲ್ಲಿ ಶುದ್ಧ ಕುಡಿಯುವ ನೀರಿಗೆ ತೊಂದರೆಯಾಗಿರುವ ಬಗ್ಗೆ ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರ ಗಮನ ಸೆಳೆಯುವುದು.

ಮು.ತಿ.ನೋ.,.

4. ಶ್ರೀ ಸಾ.ರಾ. ಮಹೇಶ ಅವರು ಕರ್ನಾಟಕ ರಾಜ್ಯ ಅನುದಾನಿತ ಶಾಲಾ ಕಾಲೇಜುಗಳ ನೌಕರರು ದಿನಾಂಕ:20.07.2015ರಂದು "ಬೃಹತ್ ವಿಧಾನಸೌಧ ಚಲೋ" ಕಾರ್ಯಕ್ರಮ ಹಮ್ಮಿಕೊಂಡಿದ್ದ ಬಗ್ಗೆ ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರ ಗಮನ ಸೆಳೆಯುವುದು.

5. ಶ್ರೀ ರಮೇಶ ಬಾಳಪ್ಪ ಭೂಸನೂರ ಅವರು ವಿಜಯಪುರ ಜಿಲ್ಲೆಯ ಸಿಂಧಗಿ ಮತಕ್ಷೇತ್ರವನ್ನು ಆರ್.ಐ.ಡಿ.ಎಫ್-20ರಲ್ಲಿ ಕಾಮಗಾರಿಗೆ ನಬಾರ್ಡ್ ಯೋಜನೆಯಡಿ ಹೊರತುಪಡಿಸಿರುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರ ಗಮನ ಸೆಳೆಯುವುದು.

6. ಶ್ರೀ ಸಿ.ಟಿ. ರವಿ ಅವರು ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮವು ರೇಷ್ಮೆ ನೂಲಿನ ಖರೀದಿಗಾಗಿ ಕರೆದಿದ್ದ ಇ-ಟೆಂಡರಿನಲ್ಲಿ ಅವ್ಯವಹಾರ ಎಸಗಿರುವ ಅಧಿಕಾರಿಗಳ ಮೇಲೆ ಶಿಸ್ತು ಕ್ರಮ ಕೈಗೊಳ್ಳುವ ಬಗ್ಗೆ ಮಾನ್ಯ ಜವಳಿ ಹಾಗೂ ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರ ಗಮನ ಸೆಳೆಯುವುದು.

7. ಶ್ರೀಯುತರುಗಳಾದ ಡಾ|| ಶಿವರಾಜ ಪಾಟೀಲ್, ಬಿ.ಆರ್.ಪಾಟೀಲ್, ಬಸವರಾಜ ರಾಯರೆಡ್ಡಿ, ಹಂಪನಗೌಡ ಬಾದರ್ಲಿ, ಜಿ.ಹಂಪಯ್ಯ ಸಾಹುಕಾರ ಬಲ್ಲಟಗಿ, ಪ್ರತಾಪಗೌಡ ಪಾಟೀಲ್ ಹಾಗೂ ಇತರರು ರಾಯಚೂರಿನಲ್ಲಿ ಐ.ಐ.ಟಿ ಸ್ಥಾಪಿಸುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

8. ಶ್ರೀ ಜೆ.ಆರ್.ಲೋಬೋ ಅವರು ದಕ್ಷಿಣ ಕನ್ನಡ ಜಿಲ್ಲೆಯ ಅನುದಾನಿತ ಪದವಿ ಪೂರ್ವ ಕಾಲೇಜು ನೌಕರರಿಗೆ ಹೆಚ್.ಆರ್.ಎಂ.ಎಸ್. ನಲ್ಲಿ ಪರಿಷ್ಕೃತ ವೇತನ ವ್ಯತ್ಯಾಸದ ಮೊತ್ತ ಪರಿಗಣಿಸದೆ ಅನುಮೋದನೆ ನೀಡಿರುವುದರಿಂದ ಉಂಟಾಗುತ್ತಿರುವ ತೊಂದರೆಯ ಬಗ್ಗೆ ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಗಮನ ಸೆಳೆಯುವುದು.

9. ಶ್ರೀ ಡಿ.ಎನ್.ಜೀವರಾಜ್ ಅವರು ಶೃಂಗೇರಿ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಕೊಪ್ಪ ತಾಲ್ಲೂಕಿನ ಎನ್.ಆರ್.ಪುರದಲ್ಲಿ ನಿರ್ಮಿಸಿರುವ ಕೈಗಾರಿಕಾ ವಸಾಹತುವಿನಲ್ಲಿ ಬ್ರಹ್ಮಶ್ರೀ ಕಾಫಿ ವರ್ಕ್ಸ್‌ರವರು ನಿವೇಶನಕ್ಕಾಗಿ ಅರ್ಜಿಸಲ್ಲಿಸಿದ್ದರೂ ಹಂಚಿಕೆ ಮಾಡದೆ ಹಾಗೂ ಹಣ ಹಿಂದಿರುಗಿಸದೆ ಇರುವುದರಿಂದ ಉಂಟಾಗಿರುವ ತೊಂದರೆಯ ಬಗ್ಗೆ ಮಾನ್ಯ ಸಣ್ಣ ಕೈಗಾರಿಕೆ ಸಚಿವರ ಗಮನ ಸೆಳೆಯುವುದು.

10. ಶ್ರೀ ಹೆಚ್.ಕೆ. ಕುಮಾರಸ್ವಾಮಿ ಅವರು ಹಾಸನ ಜಿಲ್ಲೆ ಆಲೂರು ಮತ್ತು ಸಕಲೇಶಪುರ ತಾಲ್ಲೂಕು ಕೇಂದ್ರಗಳಲ್ಲಿರುವ ಮಾಧ್ಯಮಿಕ ಮತ್ತು ಪ್ರೌಢ ಶಾಲಾ ಹಾಗೂ ಕಿರಿಯ ಕಾಲೇಜಿನ ಕಟ್ಟಡಗಳ ನಿರ್ಮಾಣಕ್ಕೆ ಮಂಜೂರಾತಿ ನೀಡುವ ಬಗ್ಗೆ ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರ ಗಮನ ಸೆಳೆಯುವುದು.

ಮು.ತಿ.ನೋ.,.

11. ಶ್ರೀ ಪಿಳ್ಳಮುನಿಶಾಮಪ್ಪ ಅವರು ದೇವನಹಳ್ಳಿ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಪಂಚಾಯತ್‌ರಾಜ್ ಇಂಜಿನಿಯರಿಂಗ್ ಉಪ ವಿಭಾಗದಲ್ಲಿ ಸರ್ಕಾರದ ಬೊಕ್ಕಸಕ್ಕೆ ಲಕ್ಷಾಂತರ ರೂ.ಗಳ ನಷ್ಟ ಉಂಟು ಮಾಡಿರುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರ ಗಮನ ಸೆಳೆಯುವುದು.

12. ಶ್ರೀ ಕೆ.ಎಸ್.ಪುಟ್ಟಣ್ಣಯ್ಯ ಅವರು ರಾಜ್ಯದ ರೈತರಿಗೆ ಅನುಕೂಲವಾಗುವಂತೆ ತಿಳುವಳಿಕೆ ನೀಡಲು ನೇಮಕಗೊಂಡಿದ್ದ ಅನುವುಗಾರರಿಗೆ ಉದ್ಯೋಗ ಭದ್ರತೆ ಹಾಗೂ ಕನಿಷ್ಠ ವೇತನ ನೀಡದೆ ತೊಂದರೆಯಾಗಿರುವ ಬಗ್ಗೆ ಮಾನ್ಯ ಕೃಷಿ ರಾಜ್ಯ ಸಚಿವರ ಗಮನ ಸೆಳೆಯುವುದು.

13. ಶ್ರೀ ಜಿ.ಹೆಚ್. ಶ್ರೀನಿವಾಸ್ ಅವರು ತರಿಕೆರೆ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ಬಸ್ ಸಾರಿಗೆ ಸಂಸ್ಥೆಯ ಬಸ್ ಡಿಪೋ ನಿರ್ಮಾಣಕ್ಕೆ ಹೆಚ್ಚಿನ ಅನುದಾನ ಬಿಡುಗಡೆ ಮಾಡಿ ಟೆಂಡರ್ ಪ್ರಕ್ರಿಯೆ ಪ್ರಾರಂಭಿಸುವ ಬಗ್ಗೆ ಮಾನ್ಯ ಸಾರಿಗೆ ಸಚಿವರ ಗಮನ ಸೆಳೆಯುವುದು.

14. ಶ್ರೀ ಹೆಚ್. ಎಸ್. ಶಿವಶಂಕರ್ ಅವರು ದಾವಣಗೆರೆ ಜಿಲ್ಲೆಯ ಹರಿಹರ ತಾಲ್ಲೂಕಿನ ಸಾರಥಿ ಚಿಕ್ಕಬಿದರೆ ಗ್ರಾಮಗಳ ಮಧ್ಯೆ ಸೇತುವೆ ನಿರ್ಮಾಣ ಮಾಡುವ ಬಗ್ಗೆ ಮಾನ್ಯ ಲೋಕೋಪಯೋಗಿ ಸಚಿವರ ಗಮನ ಸೆಳೆಯುವುದು.

15. ಶ್ರೀಯುತರುಗಳಾದ ಸಾ.ರಾ. ಮಹೇಶ್, ಸಿ.ಎನ್.ಬಾಲಕೃಷ್ಣ, ಹೆಚ್.ಡಿ.ರೇವಣ್ಣ ಹಾಗೂ ಕೆ.ಎಂ.ಶಿವಲಿಂಗೇಗೌಡ ಅವರುಗಳು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಲ್ಲಿ ಕೆಂಪೇಗೌಡ ಬಡಾವಣೆಯ ಕಾಮಗಾರಿಗಳಿಗಾಗಿ ಬೋಗಸ್ ದಾಖಲೆಗಳನ್ನು ಸಲ್ಲಿಸಿ ಗುತ್ತಿಗೆ ಪಡೆದಿರುವ ಪ್ರಕರಣದಲ್ಲಿ ಶಾಮೀಲಾಗಿರುವ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳುವ ಬಗ್ಗೆ ಮಾನ್ಯ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

16. ಶ್ರೀ ಹೆಚ್.ಡಿ.ರೇವಣ್ಣ ಅವರು ಹಾಸನ ಜಿಲ್ಲೆ ಹೊಳೆನರಸೀಪುರ ಮತ್ತು ಚನ್ನರಾಯಪಟ್ಟಣ ತಾಲ್ಲೂಕುಗಳ ವ್ಯಾಪ್ತಿಯಲ್ಲಿ ಬರುವ ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತ ವ್ಯಾಪ್ತಿಯಲ್ಲಿ ಬರುವ ಗ್ರಾಮಾಂತರ ಪ್ರದೇಶಗಳಲ್ಲಿ ವಿದ್ಯುತ್ ಸರಬರಾಜು ಇಲ್ಲದೆ ರೈತರಿಗೆ ಉಂಟಾಗಿರುವ ತೊಂದರೆಯ ಬಗ್ಗೆ ಮಾನ್ಯ ಇಂಧನ ಸಚಿವರ ಗಮನ ಸೆಳೆಯುವುದು.

17. ಶ್ರೀ ಹೆಚ್.ಡಿ.ರೇವಣ್ಣ ಮತ್ತು ಶ್ರೀ ಎನ್. ಚಲುವರಾಯಸ್ವಾಮಿ ಅವರುಗಳು ಹಾಸನ ಜಿಲ್ಲೆಯ ಚನ್ನರಾಯಪಟ್ಟಣ ತಾಲ್ಲೂಕು ದಂಡಿಗನಹಳ್ಳಿ ಹೋಬಳಿ ಕಾಚೇನಹಳ್ಳಿ ಏತ ನೀರಾವರಿ ಯೋಜನೆಯ ಎರಡು ಮತ್ತು ಮೂರನೇ ಹಂತದ ಕಾಮಗಾರಿಗಳನ್ನು ಪೂರ್ಣಗೊಳಿಸುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

ಪು.ತಿ.ನೋ.,.

10. ಅರ್ಧ ಗಂಟೆ ಕಾಲಾವಧಿ ಚರ್ಚೆ

1. ಶ್ರೀ ಎಸ್.ಭೀಮಾನಾಯ್ಕ ಅವರು ಬೈರಾಪುರ ಗ್ರಾಮದಲ್ಲಿರುವ ತುಂಗಾಭದ್ರಾ ಜಲಾಶಯದ ಹಿನ್ನೀರಿನಿಂದ ಏತ ನೀರಾವರಿ ಯೋಜನೆಯಡಿ ಮಾಳ್ವಿ ಜಲಾಶಯಕ್ಕೆ 0.51 ಟಿ.ಎಂ.ಸಿ. ನೀರನ್ನು ಹರಿಸುವ ಬಗ್ಗೆ" ದಿನಾಂಕ: 21.07.2015ರಂದು ಗಮನ ಸೆಳೆಯುವ ಸೂಚನೆಯಡಿಯಲ್ಲಿ ಪ್ರಸ್ತಾಪಿಸಿದ ವಿಷಯಕ್ಕೆ ಸಂಬಂಧಿಸಿದಂತೆ ಅರ್ಧ ಗಂಟೆ ಕಾಲ ಚರ್ಚಿಸುವುದು.

2. ಶ್ರೀ ಕೆ.ಎಂ.ಶಿವಲಿಂಗೇಗೌಡ ಅವರು "ರಾಜ್ಯದಲ್ಲಿ ನಿರಂತರ ಜ್ಯೋತಿ ಯೋಜನೆಯಡಿ ಕೈಗೊಂಡಿರುವ ಕಾಮಗಾರಿಗಳು ಕಳಪೆಯಾಗಿರುವುದರಿಂದ ರೈತರಿಗೆ ಮತ್ತು ಸಾರ್ವಜನಿಕರಿಗೆ ತೊಂದರೆಯಾಗಿರುವ ಕುರಿತು" ದಿನಾಂಕ: 21.07.2015ರಂದು ಗಮನ ಸೆಳೆಯುವ ಸೂಚನೆಯಡಿಯಲ್ಲಿ ಪ್ರಸ್ತಾಪಿಸಿದ ವಿಷಯಕ್ಕೆ ಸಂಬಂಧಿಸಿದಂತೆ ಅರ್ಧ ಗಂಟೆ ಕಾಲ ಚರ್ಚಿಸುವುದು.

3. ಶ್ರೀ ಬಿ.ಬಿ.ನಿಂಗಯ್ಯ ಅವರು "ಡಾ|| ಡಿ.ಎಂ.ನಂಜುಂಡಪ್ಪ ವರದಿಯನ್ವಯ ಕೈಗೊಂಡಿರುವ ವಿಶೇಷ ಅಭಿವೃದ್ಧಿ ಯೋಜನೆಯಡಿ ಮೂಡಿಗೆರೆ ವಿಧಾನಸಭಾ ಕ್ಷೇತ್ರದ ಚಿಕ್ಕಮಗಳೂರು ತಾಲ್ಲೂಕಿನ ಕೆಲವು ಹೋಬಳಿಗಳನ್ನು ಕೈಬಿಟ್ಟಿರುವ ವಿಷಯದ ಕುರಿತು" ದಿನಾಂಕ: 21.07.2015ರಂದು ಸದನದಲ್ಲಿ ಗಮನ ಸೆಳೆಯುವ ಸೂಚನೆಯಡಿಯಲ್ಲಿ ಪ್ರಸ್ತಾಪಿಸಿದ ವಿಷಯಕ್ಕೆ ಸಂಬಂಧಿಸಿದಂತೆ ಅರ್ಧ ಗಂಟೆ ಕಾಲ ಚರ್ಚಿಸುವುದು.

11. ಖಾಸಗಿ ಸದಸ್ಯರ ಕಾರ್ಯಕಲಾಪಗಳು

I. ಖಾಸಗಿ ನಿರ್ಣಯ

ಶ್ರೀ ಎಂ.ಟಿ.ಕೃಷ್ಣಪ್ಪ ಅವರು ದಿನಾಂಕ: 02.07.2015ರಂದು ಮಂಡಿಸಿದ ಈ ಕೆಳಕಂಡ ನಿರ್ಣಯದ ಮೇಲೆ ಮುಂದುವರೆದ ಚರ್ಚೆ.

"ದೇಶದ ಬಹು ರಾಜ್ಯಗಳಲ್ಲಿ ಇಲ್ಲದ ವಿಧಾನಪರಿಷತ್ತು ರಾಜ್ಯದಲ್ಲಿಯೂ ಸಹ ಇರುವುದು ಅವಶ್ಯಕವೆನಿಸುವುದಿಲ್ಲ. ಆದಕಾರಣ ನಮ್ಮ ರಾಜ್ಯದಲ್ಲಿರುವ ವಿಧಾನಪರಿಷತ್ತನ್ನು ವಿಸರ್ಜಿಸುವ" ಕುರಿತು ಈ ಸದನವು ನಿರ್ಣಯಿಸುತ್ತದೆ.

(ಎರಡನೇ ದಿನ)

ಮು.ತಿ.ನೋ.,.

II. ಖಾಸಗಿ ಸದಸ್ಯರ ವಿಧೇಯಕಗಳನ್ನು ಮಂಡಿಸುವುದು

(i) ಕರ್ನಾಟಕ ರಾಜ್ಯ ವಿವಾಹ ವಿಧಿವಿಧಾನಗಳ ನಿಯಂತ್ರಣ ವಿಧೇಯಕ, 2015
(2015ರ ಖಾಸಗಿ ಸದಸ್ಯರ ವಿಧೇಯಕ-01)
ಶ್ರೀ ಕೆ.ಆರ್.ರಮೇಶ್ ಕುಮಾರ್ (ವಿಧಾನ ಸಭಾ ಸದಸ್ಯರು) ಅವರು:-

ಅ) 2015ನೇ ಸಾಲಿನ ಕರ್ನಾಟಕ **ರಾಜ್ಯ ವಿವಾಹ ವಿಧಿವಿಧಾನಗಳ ನಿಯಂತ್ರಣ ವಿಧೇಯಕ (2015ರ ಖಾಸಗಿ ಸದಸ್ಯರ ವಿಧೇಯಕ-01)** ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;
ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

(ii) ಕರ್ನಾಟಕ ಭೂ ಕಂದಾಯ (ಖಾಸಗಿ ಸದಸ್ಯರ ತಿದ್ದುಪಡಿ)ವಿಧೇಯಕ, 2015
(2015ರ ಖಾಸಗಿ ಸದಸ್ಯರ ವಿಧೇಯಕ-02)
ಶ್ರೀ ಕೆ.ಶಿವಮೂರ್ತಿ (ವಿಧಾನ ಸಭಾ ಸದಸ್ಯರು) ಅವರು:-

ಅ) 2015ನೇ ಸಾಲಿನ ಕರ್ನಾಟಕ **ಭೂ ಕಂದಾಯ (2015ರ ಖಾಸಗಿ ಸದಸ್ಯರ ವಿಧೇಯಕ-02)** ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;
ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

(iii) ಕರ್ನಾಟಕ ಶಿಕ್ಷಣ (ತಿದ್ದುಪಡಿ) ವಿಧೇಯಕ, 2015
(2015ರ ಖಾಸಗಿ ಸದಸ್ಯರ ವಿಧೇಯಕ ಸಂಖ್ಯೆ 03)
ಶ್ರೀ ಹೆಚ್.ಎಸ್.ಶಿವಶಂಕರ್ (ವಿಧಾನ ಸಭಾ ಸದಸ್ಯರು) ಅವರು:-

ಅ) 2015ನೇ ಸಾಲಿನ ಕರ್ನಾಟಕ ಶಿಕ್ಷಣ (ತಿದ್ದುಪಡಿ) ವಿಧೇಯಕವನ್ನು **(2015ರ ಖಾಸಗಿ ಸದಸ್ಯರ ವಿಧೇಯಕ ಸಂಖ್ಯೆ 03)** ಮಂಡಿಸಲು ಅನುಮತಿ ಕೋರುವುದು;
ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

ಎಂ.ಗುರುರಾಜ
ಕಾರ್ಯದರ್ಶಿ

Raj Nagouda

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
(http://kla.kar.nic.in/assembly/lob/lob.htm)